# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ಹೆಚ್.ಎಸ್.ಗೋಪಿನಾಥ್<br>**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 28 |
| ಉತ್ತರಿಸಬೇಕಾದ ದಿನಾಂಕ | 04.07.2023 |
| ಉತ್ತರಿಸ ಬೇಕಾದವರು | ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು |

| ಕ್ರಮ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹೆಬ್ಬಗೋಡಿ ನಗರ ಸಭೆಯ ಆನೇಕಲ್ ತಾಲ್ಲೂಕು ಕೇಂದ್ರದ ಒಂದು ಪ್ರಮುಖ ನಗರವಾಗಿದ್ದು, ಬೆಂಗಳೂರು ನಗರದಿಂದ ಸುಮಾರು 27 ಕಿ.ಮೀ ದೂರದಲ್ಲಿದ್ದು, ಇಲ್ಲಿ ವಾಸ ಮಾಡುತ್ತಿರುವ ಸಾರ್ವಜನಿಕರ ಸಂಖ್ಯೆ:95000 ಸಾವಿರ ಇದ್ದು, ಈವರೆವಿಗೂ ಒಳಚರಂಡಿಯ ಕಾಮಗಾರಿ ಆಗದಿರಲು ಕಾರಣವೇನು: (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ. ನಅಇ 17 ಯುಡಿಎಸ್ 2022, ದಿನಾಂಕ 28.03.2023 ರಲ್ಲಿ ಹೆಬ್ಬಗೋಡಿ ನಗರಕ್ಕೆ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ರೂ.194.10 ಕೋಟಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.<br><br>ಸದರಿ ಒಳಚರಂಡಿ ಯೋಜನೆಯ ತ್ಯಾಜ್ಯ ನೀರು ಶುದ್ಧೀಕರಣ ಘಟಕ ನಿರ್ಮಿಸಲು ಉದ್ದೇಶಿಸಿರುವ ಜಮೀನಿನ ಪೈಕಿ 3 ಎಕರೆ |
| ಆ) | ಈ ಹಿಂದೆಯೇ ಈ ಕಾಮಗಾರಿಯ ಬಗ್ಗೆ ಸರ್ಕಾರದ ಗಮನಕ್ಕೆ ತಂದಿದ್ದರೂ ಇನ್ನೂ ಯಾವುದೇ ಕಾರ್ಯ ಕೈಗೊಳ್ಳದೆ ಇರುವುದರಿಂದ ಸದರಿ ಕಾಮಗಾರಿಯನ್ನು ಯಾವ ಕಾಲ ಮಿತಿಯಲ್ಲಿ ಕ್ರಮ ಕೈಗೊಳ್ಳಲು ಸರ್ಕಾರ ಕ್ರಮವಹಿಸುವುದು? | ಸರ್ಕಾರಿ ಜಮೀನು ಕೆರೆಯ ಬಫರ್ ವಲಯದಲ್ಲಿರುವುದರಿಂದ ಸದರಿ ಜಾಗದಲ್ಲಿ ಮಲೀನ ನೀರು ಸಂಸ್ಕರಣ ಘಟಕವನ್ನು ನಿರ್ಮಿಸುವುದು ಸೂಕ್ತ ಸೂಕ್ತವಲ್ಲವೆಂದು ದಿನಾಂಕ 02/05/2023 ರಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ತಿಳಿಸಿರುತ್ತದೆ. |
| ಇ) | ಹೆಬ್ಬಗೋಡಿ ನಗರ ಸಭೆಯ ಒಳಚರಂಡಿ ವ್ಯವಸ್ಥೆ ಇಲ್ಲದೇ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಗಕ್ಕೆ ಬಂದಿದೆಯೇ; ಬಂದಿದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು. | ಈ ಕುರಿತು ದಿನಾಂಕ 12.05.2023 ರಂದು ಸರ್ಕಾರದ ಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಹೆಬ್ಬಗೋಡಿ ನಗರಸಭೆ ವ್ಯಾಪ್ತಿಯಲ್ಲಿ ಸರ್ಕಾರಿ ಜಾಗಗಳು ಲಭ್ಯವಿಲ್ಲದ ಕಾರಣ ತ್ಯಾಜ್ಯ ನೀರು ಶುದ್ದೀಕರಣ ಘಟಕಗಳನ್ನು ನಿರ್ಮಿಸಲು ಅಗತ್ಯವಿರುವ ಜಮೀನನ್ನು ಬೆಂಗಳೂರು ನಗರ ಜಿಲ್ಲಾಧಿಕಾರಿಯವರೆ Right to Fair Compensation and Transparency in Land Acquisition, Rehabilitation and Resettlement Act, 2013 ಅಡಿಯಲ್ಲಿ ಭೂ ಸ್ವಾಧೀನ ಮಾಡುವುದು ಸೂಕ್ತ ಎಂದು ತಿರ್ಮಾನಿಸಲಾಯಿತು. ಅದರಂತೆ, ಹೆಬ್ಬಗೋಡಿ ನಗರದ ತ್ಯಾಜ್ಯ ನೀರು ಶುದ್ದೀಕರಣ ಘಟಕಕ್ಕೆ ಅನುಮೋದಿತ ಅಂದಾಜಿನಲ್ಲಿ ಗುರುತಿಸಲಾದ ಸ್ಥಳದ ಸುತ್ತಮುತ್ತಲಿನ ಖಾಸಗಿ ಜಮೀನು ಗಳನ್ನು |

| ಕ್ರಮ ಸಂ | ಪ್ರಶ್ನೆ | ಉತ್ತರ |
| --- | --- | --- |
| | | ಗುರುತಿಸಿ ಸದರಿ ಜಮೀನುಗಳಲ್ಲಿ 30 ಮೀಟರ್ ಬಫರ್ ವಲಯಗಳನ್ನು ಹೊರತುಪಡಿಸಿ ಇನ್ನುಳಿದ ಜಮೀನನ್ನು ಭೂ ಸ್ವಾಧೀನದ ಮುಖಾಂತರ ಕಂದಾಯ ಇಲಾಖೆಯಿಂದ ಪಡೆದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಹಸ್ತಾಂತರಿಸಲು ದಿನಾಂಕ 16.05.2023 ರಂದು ಬೆಂಗಳೂರು ನಗರ ಜಿಲ್ಲಾಧಿಕಾರಿರವರನ್ನು ಮಂಡಳಿ ವತಿಯಿಂದ ಕೋರಲಾಗಿರುತ್ತದೆ.<br><br>ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ ರವರು ಮಲೀನ ನೀರು ಶುದ್ಧೀಕರಣ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ 3 ಎಕರೆ ಜಮೀನನ್ನು ಭೂ ಸ್ವಾಧೀನದ ನಂತರ ಹೆಬ್ಬಗೋಡಿ ನಗರಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವ ಕಾಮಗಾರಿಗೆ ಗುತ್ತಿಗೆದಾರರನ್ನು ನೇಮಿಸಿ 36 ತಿಂಗಳ ಅವಧಿಯೊಳಗೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ನಅಇ 33 ಯುಎಂಎಸ್ 2023

3/06/2023

**(ಬಿ.ಎಸ್.ಸುರೇಶ್)**

ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು